# ಕರ್ನಾಟಕ ಸರ್ಕಾರ

## ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ:DPI-CPI0SATS(OTH)/31/2026-SATS(E-2148207) ದಿನಾಂಕ:02.06.2026

:: ಸುತ್ತೋಲೆ ::

ವಿಷಯ : Nirantara – Mobile Based AI Student Facial Recognition Software ಮೂಲಕ ವಿದ್ಯಾರ್ಥಿಗಳ ಹಾಜರಾತಿ ನಿರ್ವಹಣಾ ವ್ಯವಸ್ಥೆ ಕುರಿತು ತರಬೇತಿ ಸಭೆಗೆ ಹಾಜರಾಗುವ ಬಗ್ಗೆ.

*****

2026-27 ನೇ ಸಾಲಿನಿಂದ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಾಲಾ - ಕಾಲೇಜು ವಿದ್ಯಾರ್ಥಿಗಳ ಹಾಜರಾತಿಯನ್ನು AI Based Student Facial Attendance Monitoring System ಮೊಬೈಲ್ ಅಪ್ಲಿಕೇಷನ್ ಮೂಲಕ ದಾಖಲಿಸುವ "ನಿರಂತರ" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರದಿಂದ ಸುತ್ತೋಲೆ ಹೊರಡಿಸಲಾಗಿದೆ. ಈ ಅಪ್ಲಿಕೇಷನ್ ಅನ್ನು Centre for E-Governance (CEG) ರವರು ಶಾಲಾ ಶಿಕ್ಷಣ ಇಲಾಖೆ ರವರ ಸಹಕಾರದಿಂದ ಅಭಿವೃದ್ಧಿ ಕಾರ್ಯವನ್ನು ಕೈಗೊಂಡು ಪೂರ್ವಗೊಳಿಸಿರುತ್ತಾರೆ. ಸರ್ಕಾರದ ಆದೇಶದಂತೆ ಯಾವುದೇ ವಿಳಂಬವಿಲ್ಲದೇ 2026-27 ನೇ ಸಾಲಿನ ಶಾಲಾ ಪ್ರಾರಂಭದ ದಿನದಿಂದಲೇ "ನಿರಂತರ" ಅಪ್ಲಿಕೇಷನ್ ಅನ್ನು ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಾಲಾ – ಕಾಲೇಜುಗಳಲ್ಲಿ ಅನುಷ್ಠಾನ ಮಾಡಿ ಮಕ್ಕಳ ಹಾಜರಾತಿಯನ್ನು ಸಲ್ಲಿಸಬೇಕಾಗಿದೆ.

ಉಲ್ಲೇಖಿತ ವಿಷಯಕ್ಕೆ ಸಂಬಂಧಿಸಿದಂತೆ, Nirantara ತಂತ್ರಾಂಶದ ಅನುಷ್ಠಾನ ಹಾಗೂ ಬಳಕೆಯ ಕುರಿತು CEG ತಂಡದವರು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು/ಸಿಬ್ಬಂದಿಗೆ ತರಬೇತಿ ನೀಡುವ ಅಗತ್ಯವಿರುವುದಾಗಿ ತಿಳಿಸಿರುತ್ತಾರೆ.

ಈ ಸಂಬಂಧ ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ದಿನಾಂಕ: 04-06-2026 ರಂದು ಸಮಯ 2:00 PM ಗೆ, D A Pandu Memorial RV Dental College, CA-37, 24th Main Rd, ITI Layout, 1st Phase, J. P. Nagar, Bengaluru, Karnataka 560078 ಇಲ್ಲಿ ತರಬೇತಿ ಸಭೆಯನ್ನು ಆಯೋಜಿಸಲಾಗಿದೆ.

ಆದ್ದರಿಂದ ಕೆಳಕಂಡ ಅಧಿಕಾರಿಗಳು/ಸಿಬ್ಬಂದಿಗಳು ಕಡ್ಡಾಯವಾಗಿ ಸದರಿ ತರಬೇತಿ ಸಭೆಗೆ ಹಾಜರಾಗುವಂತೆ ಸೂಚಿಸಲಾಗಿದೆ:

| ಕ್ರ.ಸಂ | ವಿಭಾಗ | ಭಾಗವಹಿಸುವವರು |
|---|---|---|
| 1 | ಜಿಲ್ಲಾ ಹಂತ | 1. EO (MDM)<br>2. DYPC<br>3. Computer Programmer |
| 2 | ತಾಲ್ಲೂಕು ಹಂತ | 1. BRC<br>2. ADPI (MDM)<br>3. Computer Programmer |

ಸದರಿ ಅಧಿಕಾರಿಗಳು/ಸಿಬ್ಬಂದಿಗಳು ಸಭೆಗೆ ಅಗತ್ಯ ಪೂರ್ವಸಿದ್ಧತೆಯೊಂದಿಗೆ ಸಮಯಕ್ಕೆ ಸರಿಯಾಗಿ ಹಾಜರಾಗಿ ತರಬೇತಿಯನ್ನು ಪಡೆದುಕೊಂಡು, ನಂತರ ತಮ್ಮ ವ್ಯಾಪ್ತಿಯ ಸಿಬ್ಬಂದಿಗೆ ಅಗತ್ಯ ಮಾರ್ಗದರ್ಶನ ನೀಡುವಂತೆ ಸೂಚಿಸಲಾಗಿದೆ.

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ರವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

Scanned with OKEN Scanner